Akashvani: Bangalore
Regional Bulletin In Kannada
09.04.2026: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.04.2026: 14.30hrs
*********

ಮುಖ್ಯಾಂಶಗಳು:

- ಕೆಲವೇ ಕ್ಷಣಗಳಲ್ಲಿ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ; ೭ ಲಕ್ಷ ವಿದ್ಯಾರ್ಥಿಗಳ ಭವಿಷ್ಯ ನಿರ್ಧಾರ
- ವಿಧಾನಸಭಾ ಉಪಚುನಾವಣೆ ಮತದಾನ ಪ್ರಗತಿಯಲ್ಲಿ; ಮಧ್ಯಾಹ್ನದ ವೇಳೆಗೆ ಬಾಗಲಕೋಟೆಯಲ್ಲಿ ಶೇಕಡ ೪೩.೭೫, ದಾವಣಗೆರೆ ದಕ್ಷಿಣದಲ್ಲಿ ಶೇಕಡ ೩೭.೧೭ರಷ್ಟು ಮತದಾನ
- ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ವಿ. ಸೋಮಣ್ಣ ಅವರಿಂದ ರೈಲಿನಲ್ಲಿ ವಿಂಡೋ ಟ್ರೇಲಿಂಗ್ ಪರಿವೀಕ್ಷಣೆ
- ಚಾರಣಕ್ಕೆ ಪ್ರಾಮಾಣಿತ ಮಾನದಂಡ ರೂಪಿಸುವಂತೆ ಅಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ಸೂಚನೆ
- ಯೋಗೇಶ್ ಗೌಡ ಕೊಲೆ ಪ್ರಕರಣ; ಇದೇ ೧೫ಕ್ಕೆ ತೀರ್ಪು ಪ್ರಕಟಿಸಲಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ

***********

ದ್ವಿತೀಯ ಪಿಯುಸಿ ೧ರ ಫಲಿತಾಂಶ ಇನ್ನು ಕೆಲವೇ ಕ್ಷಣಗಳಲ್ಲಿ ಪ್ರಕಟವಾಗಲಿದೆ. ಇದೇ ಮೊದಲ ಬಾರಿಗೆ ಫಲಿತಾಂಶದ ಜೊತೆಗೆ ಅಂಕಪಟ್ಟಿಯೂ ಲಭ್ಯವಿದ್ದು, ಡಿಜಿ ಲಾಕರ್‌ನಿಂದ ಡೌನ್‌ಲಾಡ್ ಮಾಡಿಕೊಳ್ಳಬಹುದು. ಈ ಬಾರಿ ಸುಮಾರು ೭ ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ.ಫಲಿತಾಂಶ karresults.nic.in ನಲ್ಲಿ ಲಭ್ಯವಾಗಲಿದೆ. ವಿದ್ಯಾರ್ಥಿಗಳು ಕರ್ನಾಟಕ ಒನ್ ಮೊಬೈಲ್ ಆಪ್ ಮೂಲಕ ಪಡೆಯಬಹುದು. ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸ್ ಆಪ್ ಮೂಲಕವೂ ಫಲಿತಾಂಶ ರವಾನಿಸಲಾಗುವುದು ಎಂದು ಕರ್ನಾಟಕ

ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಮಾಹಿತಿ ನೀಡಿದೆ. ಸಂಜೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸುದ್ದಿಗೋಷ್ಠಿ ನಡೆಸಿ, ಹೆಚ್ಚಿನ ಮಾಹಿತಿ ನೀಡಲಿದ್ದಾರೆ.

***********

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರಗಳ ಉಪ ಚುನಾವಣೆಯ ಮತದಾನ ಪ್ರಗತಿಯಲ್ಲಿದ್ದು, ಚುನಾವಣಾ ಆಯೋಗದ ಪ್ರಾಥಮಿಕ ಮಾಹಿತಿ ಅನ್ವಯ ಮಧ್ಯಾಹ್ನ ೧ ಗಂಟೆಯವರೆಗೆ ಬಾಗಲಕೋಟೆಯಲ್ಲಿ ಶೇಕಡ ೪೩.೭೫ರಷ್ಟು ಮತ್ತು ದಾವಣಗೆರೆ ದಕ್ಷಿಣದಲ್ಲಿ ಶೇಕಡ ೩೭.೧೭ರಷ್ಟು ಮತದಾನವಾಗಿದೆ. ಬಾಗಲಕೋಟೆಯಲ್ಲಿ ಮತದಾನ ಶಾಂತಿಯುತವಾಗಿ ನಡೆಯುತ್ತಿದ್ದು, ಈ ಬಗ್ಗೆ ನಮ್ಮ ಜಿಲ್ಲಾ ಪ್ರತಿನಿಧಿ ಪರಶುರಾಮ್ ಪೇಟ್‌ಕರ್ ಹೆಚ್ಚಿನ ಮಾಹಿತಿ ನೀಡಿದ್ದಾರೆ.

****ಧ್ವನಿ****ಪರಶುರಾಮ್ ಪೇಟ್‌ಕರ್

ಇನ್ನೊಂದೆಡೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬೆಳಿಗ್ಗೆ ನೀರಸವಾಗಿ ಆರಂಭಗೊಂಡ ಮತದಾನ ಬಿಸಿಲು ಹೆಚ್ಚಿದಂತೆ ಸ್ವಲ್ಪ ಚುರುಕು ಪಡೆಯಿತು. ನಗರ ಪ್ರದೇಶಕ್ಕಿಂತ ಗ್ರಾಮೀಣ ಪ್ರದೇಶದಲ್ಲಿ ಹಕ್ಕು ಚಲಾವಣೆಗೆ ಮತದಾರರು ಹೆಚ್ಚು ಉತ್ಸಾಹ ತೋರುತ್ತಿರುವುದು ಕಂಡು ಬರುತ್ತಿದೆ. ಕ್ಷೇತ್ರದಲ್ಲಿ ಒಟ್ಟಾರೆ ೨೮೪ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ೧೦ ವಿಶೇ? ಮತಗಟ್ಟೆಗಳಾಗಿವೆ. ಆರಂಭದಲ್ಲಿ ಮತಗಟ್ಟೆ ಸಂಖ್ಯೆ ೬೬ ರ ಮತಯಂತ್ರದಲ್ಲಿ ಅಣಕು ಮತದಾನದ ವೇಳೆ ದೋ? ಕಂಡುಬಂದ ಪರಿಣಾಮ ಮತಯಂತ್ರ ಬದಲಾಯಿಸಿ ಸಾಮಾನ್ಯ ಮತದಾನಕ್ಕೆ ಅವಕಾಶ ಮಾಡಿಕೊಡಲಾಯಿತು. ಶಿರಮಗೊಂಡನಹಳ್ಳಿಯ ಮತಗಟ್ಟೆ ಸಂಖ್ಯೆ ೨೪೨ ರಲ್ಲಿ ಮತಯಂತ್ರದಲ್ಲಿ ದೋಷ ಕಾಣಿಸಿಕೊಂಡು ಕೆಲ ಹೊತ್ತು ಮತದಾನ ಸ್ಥಗಿತಗೊಂಡಿತ್ತು. ಎಲ್ಲಾ ೨೮೪ ಮತಗಟ್ಟೆಗಳಲ್ಲಿ ಶಾಂತಿಯುತ ಮತದಾನ ನಡೆಯುತ್ತಿದ್ದು, ೭೬ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚುವರಿ ಪೊಲೀಸ್ ಮತ್ತು ಅರೆ ಮಿಲಿಟರಿ ಪಡೆ ನಿಯೋಜಿಸಲಾಗಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಮತದಾನದ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

*****ಧ್ವನಿ**** ಗಿತ್ತೆ ವಿಠ್ಠಲ ಮಾಧವರಾವ್

***********

ಕೇಂದ್ರ ಬೃಹತ್ ಕೈಗಾರಿಕಾ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಜಂಟಿಯಾಗಿ ಇಂದು ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಮೈಸೂರಿನವರೆಗೆ ವಿಂಡೋ ಟ್ರೇಲಿಂಗ್ ಪರಿವೀಕ್ಷಣೆ ನಡೆಸಿದರು.

ಒಡೆಯರ್ ಎಕ್ಸ್ ಪ್ರೆಸ್ ರಾಮನಗರದಲ್ಲಿ ನಿಲುಗಡೆ ಬಗ್ಗೆ ರೈಲ್ವೆ ಮಂಡಳಿಯಿಂದ ಅನುಮತಿ ಸಿಕ್ಕಿದ ಬಳಿಕ ಸಚಿವರು ಈ ಪರಿಶೀಲನೆ ನಡೆಸಿದರು. ಮಾರ್ಗದುದ್ದಕ್ಕೂ ಕೆಳ ಮತ್ತು ಮೇಲ್ಸೆತುವೆಗಳ ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಖುದ್ದು ವೀಕ್ಷಿಸಿ, ಪರಿಶೀಲನೆ ನಡೆಸಿದರು. ಮಂಡ್ಯ ಮತ್ತು ರಾಮನಗರ ಹಾಗೂ ಮೈಸೂರು ಲೋಕಸಭಾ ಕ್ಷೇತ್ರಗಳ ಕುರಿತ ರೈಲ್ವೆ ಬಾಕಿ ಯೋಜನೆಗಳ ಬಗ್ಗೆಯೂ ರೈಲ್ವೆ ರಾಜ್ಯ ಸಚಿವರು ಮತ್ತು ಉನ್ನತ ಅಧಿಕಾರಿಗಳ ಜತೆ ಕುಮಾರಸ್ವಾಮಿ ಚರ್ಚಿಸಿದರು.ಮಂಡ್ಯ ಜಿಲ್ಲೆಯಲ್ಲಿ ಸುಮಾರು ೧೫ ನಿಮಿಷ ರೈಲ್ವೆ ಅಧಿಕಾರಿಗಳು ಹಾಗೂ ಸಂಬಂಧಿಸಿದವರ ಜೊತೆ ಮಾತುಕತೆ ನಡೆಸಿದ ಉಭಯ ಸಚಿವರು, ನಿಲ್ದಾಣದ ಸಮಸ್ಯೆ, ಪ್ರಮುಖ ರೈಲುಗಳ ಪೈಕಿ ಯಾವ ರೈಲುಗಳು ಜಿಲ್ಲೆಯ ಯಾವ ನಿಲ್ದಾಣದಲ್ಲಿ ನಿಲ್ಲಬೇಕಾದ ಅವಶ್ಯಕತೆ ಇದೆ ಎಂದು ಮಾಹಿತಿ ಪಡೆದುಕೊಂಡರು. ಸಚಿವರ ಜತೆ ದಕ್ಷಿಣ ನೈರುತ್ಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಸೇರಿ ಹಿರಿಯ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

***********

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಪ್ರವಾಸಿತಾಣದ ಮಾಣಿಕ್ಯಧಾರ ಬಳಿ ಕೇರಳಂನ ಬಾಲಕಿ ಶ್ರೀನಂದ ನಾಪತ್ತೆಯಾಗಿ ಎರಡು ದಿನಗಳು ಕಳೆದಿದೆ. ಇದುವರೆಗೆ ಪತ್ತೆಯಾಗದ ಹಿನ್ನೆಲೆಯಲ್ಲಿ ಅರಣ್ಯ ಹಾಗು ಪೊಲೀಸ್ ಇಲಾಖೆ ಸಿಬ್ಬಂದಿ ಕಾರ್ಯಾಚರಣೆ ಚುರುಕುಗೊಳಿಸಿದ್ದಾರೆ. ಪಶ್ಚಿಮ ವಲಯ ಐ.ಜಿ.ಪಿ ಅಮಿತ್ ಸಿಂಗ್, ಚಿಕ್ಕಮಗಳೂರು ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ದಯಾಮ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಕೇರಳಂ ರಾಜ್ಯದ ಪೊಲೀಸರು ಕೂಡ ಇಂದು ಚಿಕ್ಕಮಗಳೂರಿಗೆ ಭೇಟಿ ನೀಡಿದ್ದು ಪ್ರಕರಣದ ಗ್ಗೆ ಜಿಲ್ಲಾಡಳಿತದಿಂದ ಮಾಹಿತಿ ಪಡೆದಿದ್ದಾರೆ. ಈ ನಡುವ ಬಾಲಕಿ ಪತ್ತೆಗೆ ನುರಿತ ಅರಣ್ಯ ಸಿಬ್ಬಂದಿ ಡ್ರೋಣ್ ಸೇರಿ ಆಧುನಿಕ ಉಪಕರಣಗಳನ್ನು ಬಳಸಿ ಕಾರ್ಯಾಚರಣೆ ನಡೆಸುವಂತೆ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಸೂಚನೆ ನೀಡಿದ್ದಾರೆ.

***********

ರಾಜ್ಯದ ಗಿರಿಶ್ರೇಣಿಗಳಿಗೆ ಬರುವ ಚಾರಣಿಗರ ಸುರಕ್ಷತೆಯ ದೃಷ್ಟಿಯಿಂದ ದೇಶಕ್ಕೆ ಮಾದರಿಯಾಗುವಂತಹ ಪ್ರಮಾಣಿತ ಮಾನದಂಡ - ಎಸ್.ಓ.ಪಿ ರೂಪಿಸುವಂತೆ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೊಡಗಿನ ತಡಿಯಾಂಡಮೋಲ್ ಚಾರಣದ ವೇಳೆ ಕೇರಳದ ಶರಣ್ಯ ಎಂಬ ಮಹಿಳೆ ೩ ದಿನ ಕಾಡಿನಲ್ಲಿ ದಿನ ಕಳೆದ ಹಾಗೂ ಚಂದ್ರದ್ರೋಣ ಪರ್ವತದಲ್ಲಿ ಅಪ್ರಾಪ್ತ ವಯಸ್ಕ ಬಾಲಕಿ ನಾಪತ್ತೆಯಾಗಿರುವ ಹಿನ್ನೆಲೆಯಲ್ಲಿ ಈ ಸೂಚನೆ ನೀಡಿದ್ದಾರೆ. ಅರಣ್ಯ ಇಲಾಖೆ ಈಗಾಗಲೇ ಅಭಿವೃದ್ಧಿಪಡಿಸಿರುವ ಇ-ಗಸ್ತು, ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಬಳಕೆ ಮಾಡುವ ಎಂ.ಸ್ಟ್ರೈಪ್ಸ್ ನಂತಹ ಆಪ್ ರೀತಿಯಲ್ಲೇ ಚಾರಣ ಅವಧಿಯಲ್ಲಿ ತಾತ್ಕಾಲಿಕವಾಗಿ ಚಾರಣಿಗರ ಮೊಬೈಲ್‌ನಲ್ಲಿ ಈ ಆಪ್ ಅಳವಡಿಸಿದರೆ, ಯಾರೇ ದಾರಿ ತಪ್ಪಿಸಿಕೊಂಡರೂ ಅವರ ಶೋಧಕಾರ್ಯ ಸುಲಭವಾಗಲಿದೆ. ಹೀಗಾಗಿ ಆಪ್ ಅಭಿವೃದ್ಧಿಗೆ ಕ್ರಮವಹಿಸುವಂತೆ ಮತ್ತು ಚಾರಣಿಗರಿಗೆ ಗುಂಪು ವಿಮೆ ಮಾಡಿಸುವಂತೆ ಅರಣ್ಯ ಸಚಿವರು ನಿರ್ದೇಶನ ನೀಡಿದ್ದಾರೆ. ಜೊತೆಗೆ ಚಾರಣಿಗರಿಗೆ ಮಾರ್ಗದರ್ಶನ ಮಾಡುವ ನೇಚರ್ ಗೈಡ್‌ಗಳಿಗೆ ಕಡ್ಡಾಯವಾಗಿ ವೈರ್‌ಲೆಸ್ ಸೆಟ್ ನೀಡುವಂತೆ ಮತ್ತು ಚಾರಣಿಗರನ್ನು ತಮ್ಮೊಂದಿಗೆ ಕರೆದುಕೊಂಡು ಹೋಗುವ ಗೈಡ್‌ಗಳಿಗೆ ಹೊಣೆಗಾರಿಕೆ ನಿಗದಿ ಮಾಡುವಂತೆಯೂ ಸೂಚಿಸಿದ್ದಾರೆ.

***********

ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದ ತೀರ್ಪನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇದೇ ೧೫ಕ್ಕೆ ಪ್ರಕಟಿಸಲಿದೆ. ಧಾರವಾಡ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಆರೋಪಿಯಾಗಿರುವ ಈ ಪ್ರಕರಣದ ವಿಚಾರಣೆಯನ್ನು ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಮುಕ್ತಾಯಗೊಳಿಸಿ ಇಂದಿಗೆ ತೀರ್ಪು ಕಾಯ್ದಿರಿಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಎರಡೂ ಕಡೆಯ ವಕೀಲರು ಸಾವಿರಾರು ಪುಟಗಳ ಸುಪ್ರೀಂಕೋರ್ಟ್ ತೀರ್ಪುಗಳನ್ನು ಸಲ್ಲಿಸಿದ್ದಾರೆ. ಇಂದು ಪ್ರಕರಣದ ೧೫ನೇ ಆರೋಪಿಯಾಗಿರುವ ವಿನಯ್ ಕುಲಕರ್ಣಿ ಸೇರಿದಂತೆ ಎಲ್ಲಾ ೨೧ ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಈ ನಡುವೆ, ನ್ಯಾಯಾಧೀಶರು ತೀರ್ಪನ್ನು ಇದೇ ೧೫ಕ್ಕೆ ಮುಂದೂಡಿ, ಆದೇಶ ನೀಡಿದ್ದಾರೆ.

***********

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರಿಗೆ ರಸಗೊಬ್ಬರದ ಪೂರೈಕೆ ಹಾಗೂ ವಿತರಣೆಯಲ್ಲಿ ಯಾವುದೇ ರೀತಿಯ ವ್ಯತ್ಯಯವಾಗದಂತೆ, ಸಮರ್ಪಕವಾಗಿರುವಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿಗೆ ವಿವಿಧ ಗ್ರೇಡ್‌ಗಳ ಒಟ್ಟು ೩೬ ಸಾವಿರದ ೫೬೦ ಟನ್ ರಸಗೊಬ್ಬರದ ಅವಶ್ಯಕತೆಯಿದೆ. ಪ್ರತಿ ತಿಂಗಳೂ ಬೇಡಿಕೆಗೆ ಅಗತ್ಯವಿರುವಷ್ಟು ರಸಗೊಬ್ಬರ ರೈತರಿಗೆ ದೊರೆಯುವ ನಿಟ್ಟಿನಲ್ಲಿ ಅಗತ್ಯ ದಾಸ್ತಾನು ಮಾಡಿಕೊಳ್ಳುವಂತೆ ಸೂಚಿಸಿದ್ದಾರೆ. ರೈತರು ತಮ್ಮ ಬೆಳೆಗಳಿಗೆ ಯೂರಿಯಾ ರಸಗೊಬ್ಬರದ ಜೊತೆಗೆ ಇತರೆ ಸಂಯುಕ್ತ ರಸಗೊಬ್ಬರಗಳನ್ನು ಬಳಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಈ ಕುರಿತಂತೆ ಜಿಲ್ಲೆಯಾದ್ಯಂತ ರೈತರಿಗೆ ಅರಿವು ಮತ್ತು ತಾಂತ್ರಿಕ ಮಾಹಿತಿಯನ್ನು ತಲುಪಿಸುವಂತೆ ಕೃಷಿ ವಿಜ್ಞಾನಿಗಳು ಮತ್ತು ಕೃಷಿ ಹಾಗೂ ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಸಗೊಬ್ಬರ ಜೊತೆಗೆ ಮುಂಗಾರು ಹಂಗಾಮಿಗೆ ಅಗತ್ಯವಿರುವ ಬಿತ್ತನೆ ಬೀಜಗಳ ವಿತರಣೆಯಲ್ಲಿ ಕೂಡಾ ಯಾವುದೇ ವ್ಯತ್ಯಯವಾಗದಂತೆ ಎಚ್ಚರ ವಹಿಸುವಂತೆ ತಿಳಿಸಿದ್ದಾರೆ.

***********

೧. ಬೆಂಗಳೂರಿನ ಹೊಸೂರು ರಸ್ತೆಯಲ್ಲಿರುವ ವಾಹನದ ದಟ್ಟಣೆ ನಿವಾರಿಸುವ ನಿಟ್ಟಿನಲ್ಲಿ ಬಿ-ಸ್ಮೈಲ್ ಮೂಲಕ ಹೊಸೂರು ರಸ್ತೆಯಿಂದ ಕಾಳೇನ ಅಗ್ರಹಾರದವರೆಗಿನ ಬನ್ನೇರುಘಟ್ಟ ಮುಖ್ಯರಸ್ತೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಬೆಂಗಳೂರು ದಕ್ಷಿಣ ನಗರಪಾಲಿಕೆ ಆಯುಕ್ತ ಕೆ.ಎನ್.ರಮೇಶ್ ತಿಳಿಸಿದ್ದಾರೆ.

******END*****